ಸಂದರ್ಭದಲ್ಲಿ ಕಲಬೆರಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಈ ನಿಟ್ಟಿನಲ್ಲಿ ಕೈಗೊಂಡ ಕ್ರಮವೇನು?

ಉ) ಹಾಲು ಉತ್ಪಾದಕರಿಗೆ ಉತ್ಪಾದನೆಗೆ ತಕ್ಕ ಬೆಲೆ ಸಿಗುತ್ತಿಲ್ಲದಿರುವ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಳ್ಳಲು ಉದ್ದೇಶಿಸಿದೆ?

ಶ್ರೀ ಎ.ಕೃಷ್ಣಪ್ಪ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ಹೌದು.

ಆ) ಸಂಬಂಧಪಟ್ಟ ಇಬ್ಬರು ನೌಕರರುಗಳನ್ನು ಅಮಾನತ್ತಿನಲ್ಲಿಡಲಾಗಿದೆ. ಇಂತಹ ಪ್ರಕರಣ ಮರುಕಳಿಸದಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.

ಇ) ಹೌದು.

ಈ) ಒಂದು ಪ್ರಕರಣ ಗಮನಕ್ಕೆ ಬಂದಿದ್ದು, ಹಾಲನ್ನು ರವಾನಿಸಲಾದ ಟ್ಯಾಂಕರ್ ಮಾಲೀಕರಿಂದ ಕಲೆಬೆರಕೆ ಹಾಲಿನ ಬಾಬ್ತು ರೂ.62,491-00 ಹಾಗೂ ದಂಡ ರೂ. 10,000-00ಗಳನ್ನು ವಸೂಲಿ ಮಾಡಲಾಗಿದೆ. ಹಾಗೂ ಗುತ್ತಿಗೆದಾರರನ್ನು ಕಪ್ಪು ಪಟ್ಟಿಯಲ್ಲಿ ಸೇರಿಸಲಾಗಿದೆ.

ಉ) ಬೆಂಗಳೂರು ಹಾಲು ಒಕ್ಕೂಟವು ಸಂಘಗಳಿಂದ ಶೇಖರಿಸುವ 3.5 ಜಿಡ್ಡು ಹಾಗೂ 8.5 ಎಸ್.ಎಸ್.ಎಫ್. ಹೊಂದಿರುವ ಹಾಲಿಗೆ ಕೆ.ಜಿ.ಒಂದಕ್ಕೆ ರೂ.8.70 ಪೈಸೆಯಂತೆ ನೀಡಲಾಗುತ್ತಿದೆ. ಇದು ಇತರೆ ಒಕ್ಕೂಟಗಳ ಹಾಗೂ ಅಕ್ಕಪಕ್ಕದ ರಾಜ್ಯಗಳಿಗೆ ಹೋಲಿಸಿದಾಗ ಸಮಂಜಸವಾದ ದರವಾಗಿರುತ್ತದೆ.

ಜೆ.ಎಂ.ಎಫ್.ಸಿ. ನ್ಯಾಯಾಲಯ.

58(44)

ಶ್ರೀ ಮಹದೇವಪ್ರಸಾದ್ ಹೆಚ್.ಎಸ್ (ಗುಂಡ್ಲುಪೇಟೆ): ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಗುಂಡ್ಲು ಪೇಟೆ, ಜೆ.ಎಂ.ಎಫ್.ಸಿ. ನ್ಯಾಯಾಲಯವು ಶಿಥಿಲವಾಗಿರುವ ಬಾಡಿಗೆ ಕಟ್ಟಡದಲ್ಲಿ ಕೆಲಸ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ನ್ಯಾಯಾಲಯಕ್ಕೆ ಸ್ವಂತ ಕಟ್ಟಡ ಹೊಂದಲು ಸರ್ಕಾರ ಉದ್ದೇಶಿಸಿದೆಯೇ?

ಇ) ಸರ್ಕಾರದವರು ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

ಈ) ಈ ನ್ಯಾಯಾಲಯವನ್ನು ಪ್ರಸ್ತುತವಾಗಿ ಕೆಲಸ ನಿರ್ವಹಿಸುತ್ತಿರುವ ಕಟ್ಟಡದಿಂದ ಸಣ್ಣ ನೀರಾವರಿ ಇಲಾಖೆಯ ಖಾಲಿ ಕಟ್ಟಡಕ್ಕೆ ಸ್ಥಳಾಂತರಿಸಲು ಸರ್ಕಾರವು ಉದ್ದೇಶಿಸಿದಿಯೇ? ಹಾಗಿದ್ದರೆ ಈ ಬಗ್ಗೆ ಕೈಗೊಂಡಿರುವ ಕ್ರಮವೇನು?

ಶ್ರೀ ಡಿ.ಬಿ.ಚಂದ್ರೇಗೌಡ (ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು):

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಹೌದು: ಈ ನ್ಯಾಯಾಲಯಕ್ಕೆ ಸ್ವಂತ ಕಟ್ಟಡ ಹೊಂದಲು ಸರ್ಕಾರಕ್ಕೆ ಉದ್ದೇಶವಿದೆ.

ಇ) ಈ ಕಾಮಗಾರಿಗಾಗಿ ಅಗತ್ಯವಾದ 133 ಲಕ್ಷರೂಗಳ ನಕ್ಷೆ ಮತ್ತು ಅಂದಾಜನ್ನು ಸಿದ್ದಪಡಿಸಿದ್ದು ಪ್ರಸಕ್ತ ಸಾಲಿನಲ್ಲಿ ಇದಕ್ಕಾಗಿ ಅನುದಾನ ಇಲ್ಲದಿರುವ ಕಾರಣ, ಅಗತ್ಯ ಅನುದಾನವನ್ನು ಮುಂದಿನ ಸಾಲಿನ ಆಯವ್ಯಯದಲ್ಲಿ ಒದಗಿಸಲು ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಈ) ನೀರಾವರಿ ಇಲಾಖೆಗೆ ಸೇರಿದ ಖಾಲಿ ಕಟ್ಟಡಕ್ಕೆ ನ್ಯಾಯಾಲಯದ ಕಟ್ಟಡವನ್ನು ಸ್ಥಳಾಂತರಿಸಲು ಉದ್ದೇಶಿಸಿದ್ದರೂ, ಸದರೀ ಕಟ್ಟಡವು ಸ್ವಂತ ಉಪಯೋಗಕ್ಕಾಗಿ ಬೇಕಾಗಿದಯೆಂದು ನೀರಾವರಿ ಇಲಾಖೆಯು ತಿಳಿಸಿರುವ ಕಾರಣ ಈ ದಿಸೆಯಲ್ಲಿ ಮುಂದಿನ ಕ್ರಮ ಜರುಗಿಸಲಾಗುತ್ತಿಲ್ಲ.

ಗುಂಡ್ಲುಪೇಟೆ ತಾಲ್ಲೂಕಿನ ಪ್ರವಾಸ ಕೇಂದ್ರಗಳು.

59(47).

ಶ್ರೀ. ಹೆಚ್.ಎಸ್.ಮಹಾದೇವ ಪ್ರಸಾದ್ (ಗುಂಡ್ಲುಪೇಟೆ): ಮಾನ್ಯ ಪ್ರವಾಸೋದ್ಯಮ ಹಾಗೂ ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೆ?

ಅ) ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ಪ್ರವಾಸಿ ಕೇಂದ್ರಗಳನ್ನಾಗಿ ಯಾವ ಯಾವ ಸ್ಥಳವನ್ನು ಗುರುತಿಸಲಾಗಿದೆ?